# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
# ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 24.02.2021 ರ
## ಸಭಾ ನಡುವಳಿ

ದಿನಾಂಕ: 24.02.2021 ರಂದು ಬೆಳ್ಳಿಗೆ 11.30 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ಕಛೇರಿ, ದಾಸರಹಳ್ಳಿ, ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಜಿ ದೇವರಾಜ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ) |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 4 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 05 |
| 5 | ಬಿ. ನಾಗೇಂದ್ರಪ್ಪ | ಎಸ್.ಡಿ.ಎ, ಕಂದಾಯ ಶಾಖೆ, ಥಣಿಸಂದ್ರ |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಕೋವಿಡ್–19ರ ಸಂಬಂಧ ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಜಾಗೃತ ಕ್ರಮಗಳ ಬಗ್ಗೆ.:** ವಾರ್ಡ್ ನಂ. 05ರ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಜಿ. ವೆಂಕಟೇಶ್ ರವರು ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕ ಸಂಪರ್ಕ ವ್ಯವಹಾರಗಳಾದ ಕಟ್ಟಡ ಕಾಮಗಾರಿ, ಹೊಟೆಲ್, ಸಾರ್ವಜನಿಕರು ಸೇರುವ ಸ್ಥಳಗಳಲ್ಲಿ ಸಾಮಾಜಿಕ ಅಂತರ ಕಾಪಾಡುವುದು, ಕಡ್ಡಾಯವಾಗಿ ಮಾಸ್ಕ್ ಧರಿಸುವುದು, ಕೈಗಳ ಸ್ವಚ್ಚತೆ ಕಾಪಾಡುವುದು, ಸಾರ್ವಜನಿಕರ ಸ್ಥಳಗಳಲ್ಲಿ ಎಲ್ಲೆಂದರೆ ಅಲ್ಲಿ ಹೂಗುಳುವುದರ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದು ಹಾಗೂ ಹೊರರಾಜ್ಯಗಳಿಂದ ಬರುವ



Scanned by CamScanner

ಪ್ರಯಾಣಿಕರ ಮೇಲೆ ನಿಗಾ ಇಟ್ಟು ಕಡ್ಡಾಯವಾಗಿ ಕೋವಿಡ್ ಟೆಸ್ಟ್ ಮಾಡಿಸಿಕೊಳ್ಳಲು ಕ್ರಮ ವಹಿಸಲು ಕೋರಿದರು.

2. ವಾರ್ಡ್ ವ್ಯಾಪ್ತಿಯಲ್ಲಿನ ಬ್ಲಾಕ್ ಸ್ಪಾಪ್‌ಗಳಲ್ಲಿ ಸಾರ್ವಜನಿಕರು ಕಸ ಎಸೆಯದಂತೆ ನಿಗಾ ವಹಿಸಲು ಕೋರಿದರು.

3. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗಳ ನಿರ್ವಹಣೆ ಹಾಗೂ ಚರಂಢಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ವಿಲೇವಾರಿ ಮಾಡಲು ಹಾಗೂ ಕುಡಿಯುವ ನೀರನ ಅಭಾವ ವಿರುವ ಪ್ರದೇಶಗಳಲ್ಲಿ ಟ್ಯಾಂಕರ ಮುಖಾಂತರ ನೀರು ಸರಬರಾಜು ಮಾಡಲು ಈಗಾಗಲೇ ನಿಯೋಜನೆ ಮಾಡಲಾಗಿರುವ ಗುತ್ತಿಗೆದಾರರ ಗುತ್ತಿಗೆ ಅವಧಿ ಮುಕ್ತಾಯಗೊಂಡಿರುವುದರಿಂದ ಸಾರ್ವಜನಿಕರ ದೂರುಗಳೀಗೆ ಸ್ಪಂದಿಸಿ ದೂರುಗಳನ್ನು ಬಗೆಹರಿಸಲು ಹಾಗೂ ಕುಡಿಯುವ ನೀರಿನ ಅಭಾವವಿರುವ ಪ್ರದೇಶಗಳಲ್ಲಿ ನೀರಿನ ಸರಬರಾಜು ಮಾಡಲು ಸಾಧ್ಯವಾಗುತ್ತಿರುವುದಿಲ್ಲವೆಂದು ಹಾಗೂ 2020-21ನೇ ಸಾಲಿನ ಕ್ರಿಯಾ ಯೋಜನೆಗೆ ಇಲ್ಲಿಯವರೆವಿಗೂ ಕೇಂದ್ರ ಕಛೇರಿಯಿಂದ ಅನುಮೋದನೆ ಹಾಗೂ ಜಾಬ್ ಸಂಖ್ಯೆಗಳನ್ನು ನೀಡಿರುವುದಿಲ್ಲವೆಂದು ಸ.ಅ ರವರು ತಿಳಿಸಿದರು, ಸದರಿ ವಿಷಯದ ಬಗ್ಗೆ ನೊಡೆಲ್ ಅಧಿಕಾರಿಯವರು ಈ ಬಗ್ಗೆ ಪರಿಶೀಲಿಸಿ ಟ್ರಾಕ್ಟರ್ ವಾಹನ, ಜೆ.ಸಿ.ಬಿ ಹಾಗೂ ಕೂಲಿ ಆಳುಗಳನ್ನು ಹಾಗೂ ನೀರಿನ ಟ್ಯಾಂಕರ್ ವಾಹನವನ್ನು ಹೊರಗುತ್ತಿಗೆಯಿಂದ ಪಡೆದು ಕಾಮಗಾರಿಯನ್ನು ನಿರ್ವಹಿಸಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಿದರು.

4. ರಾಜೇಂದ್ರ ಹೆಗಡೆ, ಟೆಲಿಕಾಂ ಬಡಾವಣೆ, ರವರು ಮಾತನಾಡಿ ಟೆಲಿಕಾಂ ಬಡಾವಣೆಯಲ್ಲ ಪಾರ್ಕ್‌ಗಳ ಅಭಿವೃದ್ಧಿಪಡಿಸಲು ಹಾಗೂ ಪಾರ್ಕ್‌ಗಳಿಗೆ ವಿದ್ಯುತ್ ದೀಪಗಳನ್ನು ಅಳವಡಿಸಲು ಮನವಿ ಮಾಡಿದರು ಹಾಗೂ ಬಡಾವಣೆಗಳಲ್ಲಿ ಎಲ್.ಇ.ಡಿ ಬೀದಿ ದೀಪಗಳನ್ನು ಅಳವಡಿಸುವಂತೆ ಕೋರಿದರು. ಹಾಗೂ ಟೆಲಿಕಾಂ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ವಿವರಿಸಿದರು ಈ ಬಗ್ಗೆ ಕೂಡಲೇ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಕ್ರಮ ವಹಿಸುವಂಥೆ ಸೂಚಿಸಿದರು.

5. 2021-22ನೇ ಸಾಲಿನ ಪಾಲಿಕೆಯ ಅಯವ್ಯಯಕ್ಕೆ ಪೂರಕವಾದ ಸಲಹೆ ಸೂಚನೆಗಳ ಬಗ್ಗೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸರಬರಾಜು, ಚರಂಡಿಗಳಲ್ಲಿ ಹೂಳು ತೆಗೆದು ವಿಲೇವಾರಿ ಮಾಡುವುದು, ರಸ್ತೆ ಗುಂಡಿ ನಿರ್ವಹಣೆ, ಕೊಳವೆ ಬಾವಿಗಳ ನಿರ್ವಹಣೆ ಇತರೆ ತುರ್ತು ನಿರ್ವಹಣೆಯ ಕಾಮಗಾರಿಗಳಿಗಾಗಿ ಅನುದಾನವನ್ನು ಅಳವಡಿಸಿಕೊಳಲು ಮಾನ್ಯ ಅಧ್ಯಕ್ಷರು ವಾರ್ಡ್ ಅಭಿಯಂತರರಿಗೆ ಸೂಚನೆ ನೀಡಿದರು.

6. ಟೆಲಿಕಾಂ ಬಡಾವಣೆ 1ನೇ ಮುಖ್ಯರಸ್ತೆಯಲ್ಲಿ ಅಡಿಗಾಲುವೆಯನ್ನು ಎತ್ತರಿಸಿ ನೀರು ಸರಾಗವಾಗಿ ಹರಿಯುವಂತೆ ಅನುವು ಮಾಡಿಕೊಡುವಂಥೆ ಕೋರಿದಿರು ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಸ.ಅ -5 ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.



Scanned by CamScanner

7. ಒಣ ಕಸ ವಿಲೇವಾರಿಗಾಗಿ ಹೆಚ್ಚುವರಿ ಆಟೋ ಟಿಪ್ಪರ್‌ಗಳನ್ನು ಒದಗಿಸಲು ಆರೋಗ್ಯ ಪರಿವೀಕ್ಷಕರು ಮನವಿ ಮಾಡಿದರು ಈ ಬಗ್ಗೆ ಅಧ್ಯಕ್ಷರು ಸಂಬಂಧಪಟ್ಟ ಘನತ್ಯಾಜ್ಯ ಸ.ಕಾ.ಅ ರವರಿಗೆ ಮಾತನಾಡಿ ಕೂಡಲೇ ಕ್ರಮ ವಹಿಸುವಂತೆ ಸೂಚಿಸಿದರು.

8. ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್‌ಗಳೂ ಹೆಚ್ಚಾಗಿದ್ದು, ಕಸ ವಿಲೇವಾರಿ ಸಮರ್ಪಕವಾಗಿರುವುದಿಲ್ಲವೆಂದು ಸಾರ್ವಜನಿಕರಿಂದ ದೂರುಗಳೂ ಬಂದಿರುತ್ತದೆ. ಈ ಬಗ್ಗೆ ಆರೋಗ್ಯ ಪರಿವೀಕ್ಷಕರು ಕ್ರಮ ವಹಿಸಲು ಸೂಚಿಸಿರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್-19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾನುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)
24/02/2021

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.



Scanned by CamScanner